**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ**
**ಅಸಲು ದಾವಾ ಸಂಖ್ಯೆ .517/2025 , D.W.-1**

ದಿನಾಂಕಃ 17-02-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಪ್ರತಿವಾದಿ ಪರ ವಕೀಲರಿಂದ ಃ-

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸುತ್ತಿದ್ದೇನೆ. ಅದನ್ನು ಓದಿ, ತಿಳಿದು, ಸಹಿ ಮಾಡಿರುತ್ತೇನೆ. ಅದರಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ.

ಸಾಕ್ಷಿಯು ಕೆಳಕಂಡ ದಾಖಲೆಗಳನ್ನು ಹಾಜರು ಮಾಡಿದ್ದು ಅವುಗಳನ್ನು ಕಾಲಂ 1 ರಲ್ಲಿ ತೋರಿಸಿದಂತೆ ನಿಶಾನೆಗೊಳಿಸಲಾಗಿದೆ.

| 1 | 2 |
|---|---|
| ನಿಡಿ-1 ಮತ್ತು 2 | ಎರಡು ಅಡ್ ಮಿಷನ್ ರಿಜಿಸ್ಟರ್ ನ ದೃಢೀಕೃತ ನಕಲು |
| ನಿಡಿ-3 | ಶಾಲಾ ವರ್ಗವಣಾ ಪತ್ರ ದ ದೃಢೀಕೃತ ನಕಲು |
| ನಿಡಿ-4 | ಶಾಲಾ ಪ್ರವೇಶದ ಪುಸ್ತಕದ ದೃಢೀಕೃತ ನಕಲು |

ಪಾಟೀ ಸವಾಲುಃ ವಾದಿ ಪರ ವಕೀಲರಿಂದ ಃ-

ವಾದಿಯ ತಂದೆ ಹೆಸರು ವಿಜಯ್ ಕುಮಾರ್ ಎಂದು ಖಚಿತಪಡಿಸಿಕೊಳ್ಳಲು ಯಾವುದಾದರೂ ದಾಖಲಾತಿಯನ್ನು ಪಡೆದುಕೊಂಡಿರುತ್ತಿರಾ ಎಂದರೆ ಸಾಕ್ಷಿ ವಾದಿಯ ಅಜ್ಜ ಅಜ್ಜಿ ನೀಡಿದ ಮಾಹಿತಿ ಮೇರೆಗೆ ದಾಖಲೆ ಮಾಡಿಕೊಂಡಿರುತ್ತೇವೆ ಎಂದು ನುಡಿದಿರುತ್ತಾರೆ. ನಿಪಿ-10 ರಲ್ಲಿ ವಾದಿಯ ತಂದೆ ಹೆಸರು ಷಡಾಕ್ಷರಿ ಸಿ ಎಂದು ನಮೂದು ಇದೆ ಎಂದರೆ ಸಾಕ್ಷಿ ಇರಬಹುದು ಎಂದು ನುಡಿದಿರುತ್ತಾರೆ. ವಾದಿಯ ಅಜ್ಜ ಅಜ್ಜಿ ದಾಖಲಾತಿಯನ್ನು ನೀಡಿದ್ದರೂ ಸಹ ನೀವು ತಪ್ಪಾಗಿ ನಮೂದು ಮಾಡಿಕೊಂಡಿರುತ್ತಿರಾ ಎಂದರೆ ಸರಿಯಲ್ಲ. ವಾದಿಯ ಹೆಸರನ್ನು ನ್ಯಾಯಾಲಯದ ಆದೇಶದ ಮೇರೆಗೆ ಬದಲಾವಣೆ ಮಾಡಿಕೊಡಲು ನಮಗೆ ಯಾವುದೇ ತೊಂದರೆ ಇರುವುದಿಲ್ಲ.

ಮರು ವಿಚಾರಣೆಃ ಇರುವುದಿಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸ.ಇ.

Sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ರವರು, ತರೀಕೆರೆ.